# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು – 572 103

ದೂರವಾಣಿ : 0816-2254546 0816-2255596, 0816-2255597 ಫ್ಯಾಕ್ಸ್ : 0816-2270719

ಸಂಖ್ಯೆ: ತುವಿ:ಶೈ.ವಿ:2019-20: 1515 ದಿನಾಂಕ:15.07.2019

## ಸುತ್ತೋಲೆ

ವಿಷಯ : 2019-20ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕ ಪದವಿಗಳ ದ್ವಿತೀಯ ಹಾಗೂ ತೃತೀಯ ವರ್ಷದ ಪ್ರವೇಶ ದಿನಾಂಕವನ್ನು ವಿಸ್ತರಿಸಿರುವ ಕುರಿತು.

ಉಲ್ಲೇಖ: 1. ಸಂಖ್ಯೆ:ತುವಿ:ಶೈವಿ:2019-20/259 ದಿನಾಂಕ 27.04.2019

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 15.07.2019

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2019-20ನೇ ಶೈಕ್ಷಣಿಕ ಸಾಲಿನ ದ್ವಿತೀಯ ಹಾಗೂ ತೃತೀಯ ವರ್ಷದ ಪ್ರವೇಶ ದಿನಾಂಕವನ್ನು 06.07.2019(ರೂ.1000-00ಗಳ ದಂಡ ಸಹಿತ) ಎಂದು ಈಗಾಗಲೇ ನಿಗದಿಪಡಿಸಿ, ಉಲ್ಲೇಖ (1)ರಲ್ಲಿ ಅಧಿಸೂಚಿಸಲಾಗಿರುತ್ತದೆ.

ಹಲವು ವಿದ್ಯಾರ್ಥಿಗಳು ದ್ವಿತೀಯ ಹಾಗೂ ತೃತೀಯ ವರ್ಷದ ವಿವಿಧ ಸ್ನಾತಕ ಪದವಿಗಳಿಗೆ ಪ್ರವೇಶ ಶುಲ್ಕವನ್ನು ಪಾವತಿಸಲು ಅನುಮತಿ ನೀಡುವಂತೆ ಮನವಿಗಳನ್ನು ಸಲ್ಲಿಸುತ್ತಿರುವ ಹಿನ್ನೆಲೆಯಲ್ಲಿ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ **ರೂ.1000-00ಗಳ ದಂಡ ಶುಲ್ಕದೊಂದಿಗೆ ದ್ವಿತೀಯ ಹಾಗೂ ತೃತೀಯ ವರ್ಷದ ವಿದ್ಯಾರ್ಥಿಗಳಿಗೆ ಮಾತ್ರ ದಿನಾಂಕ 20.07.2019ರವರೆಗೆ ಪ್ರವೇಶಾತಿ ದಿನಾಂಕವನ್ನು** ವಿಸ್ತರಿಸಲಾಗಿದೆ ಎಂಬುದನ್ನು ಈ ಮೂಲಕ ತಿಳಿಸಲಾಗಿದೆ. ಸದರಿ ವಿಷಯವನ್ನು ವಿದ್ಯಾರ್ಥಿಗಳ ಗಮನಕ್ಕೆ ತರುವುದು.

ವಿ.ಸೂ.:2019-20ನೇ ಶೈಕ್ಷಣಿಕ ಸಾಲಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳ ಹಾಗೂ ಕಾಲೇಜಿನ ಸಿಬ್ಬಂದಿಗಳ ಮಾಹಿತಿಗಳನ್ನು ಸಲ್ಲಿಸುವ ಸಂಬಂಧ ವಿವಿಧ ನಮೂನೆಗಳನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದ್ದು, ಪ್ರವೇಶಾನುಮೋದನೆಗೆ ದಾಖಲೆಗಳನ್ನು ಒದಗಿಸುವ ಸಂದರ್ಭದಲ್ಲಿ ಸದರಿ ನಮೂನೆಗಳನ್ನು ಭರ್ತಿ ಮಾಡಿ, ದೃಢೀಕೃತ ನಮೂನೆಗಳ ಹಾರ್ಡ್ ಕಾಪಿ ಹಾಗೂ ಸಾಫ್ಟ್ ಕಾಪಿಗಳನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು.

ಕುಲಸಚಿವರು

ಗೆ,

ಪ್ರಾಂಶುಪಾಲರು, ಘಟಕ/ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಕುಲಸಚಿವರು(ಪ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ,ತುಮಕೂರು.
3. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಇಂದೇ ಪ್ರಕಟಿಸುವುದು.
4. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಕಚೇರಿ ಪ್ರತಿ.